ನಿ-72
ಕ್ರ-147-

**ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀ ಎಂ.ಎಲ್. ಅನಿಲ್ ಕುಮಾರ್ ಇವರು ಎತ್ತಿನಹೊಳೆ ಯೋಜನೆಯಡಿ ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಕೈಗೆತ್ತಿಕೊಳ್ಳಲಾಗಿರುವ ಕಾಮಗಾರಿಗಳು ಕುಂಠಿತಗೊಂಡಿದ್ದು, ಸದರಿ ಯೋಜನೆಯ ಅಂದಾಜು ವೆಚ್ಚಕ್ಕಿಂತ ಹೆಚ್ಚಿನ ಅನುದಾನ ಬಿಡುಗಡೆಯಾಗಿದ್ದರೂ ಸಹ ಕಾಮಗಾರಿಗಳು ವಿಳಂಬವಾಗುತ್ತಿದ್ದು ಅತ್ಯಂತ ಜರೂರಾಗಿ ಕಾಮಗಾರಿಗಳನ್ನು ಕಾರ್ಯರೂಪಕ್ಕೆ ತರುವ ಬಗ್ಗೆ ನಿಯಮ 72ರಡಿಯಲ್ಲಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಜಲಸಂಪನ್ಮೂಲ ಸಚಿವರ ಉತ್ತರ.**

ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯನ್ನು 02 ಹಂತಗಳಲ್ಲಿ ಕೈಗೆತ್ತಿಕೊಳ್ಳಲಾಗಿರುತ್ತದೆ. ಮೊದಲನೇ ಹಂತದ 07 ಪ್ಯಾಕೇಜ್ ಕಾಮಗಾರಿಗಳು ಬಹುತೇಕ ಪೂರ್ಣಗೊಳ್ಳುವ ಹಂತದಲ್ಲಿದ್ದು, ಡಿಸೆಂಬರ್ 2022 ರ ಅಂತ್ಯಕ್ಕೆ ಪ್ರಾಯೋಗಿಕವಾಗಿ ಚಾಲನೆಗೊಳಿಸಲು ಯೋಜಿಸಲಾಗಿದೆ.

ಭೈರಗೊಂಡ್ಲು ಜಲಾಶಯದ ನಂತರದ ಲಿಫ್ಟ್ ಮತ್ತು ಫೀಡರ್ ಕಾಲುವೆ ಕಾಮಗಾರಿಗಳ ಮುಖಾಂತರ ಬೆಂಗಳೂರು ಗ್ರಾಮಾಂತರ, ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಿಗೆ ಕುಡಿಯುವ ನೀರು ಪೂರೈಸಲು ಮತ್ತು ಕೆರೆ ತುಂಬಿಸಲು ಅನುಮೋದಿತ ಯೋಜನಾ ವರದಿಯಲ್ಲಿ ಅವಕಾಶ ಕಲ್ಪಿಸಲಾಗಿದ್ದು, ಎತ್ತಿನಹೊಳೆ ಯೋಜನೆಯಿಂದ ಈ ಪ್ರದೇಶಗಳಿಗೆ ಸುರಕ್ಷಿತ ಕುಡಿಯುವ ನೀರನ್ನು ಪೂರೈಸಲು ಸಾಧ್ಯವಿದ್ದು, ಈ ಕಾಮಗಾರಿಗಳನ್ನು ಕೂಡಲೇ ಕೈಗೆತ್ತಿಕೊಳ್ಳಲು ಸದರಿ ಜಿಲ್ಲೆಗಳ ಜನಪ್ರತಿನಿಧಿಗಳು ತೀವ್ರವಾಗಿ ಒತ್ತಾಯಿಸುತ್ತಿರುವುದರಿಂದ ಸಮತೋಲನ ಜಲಾಶಯ ನಿರ್ಮಾಣದ ಪರ್ಯಾಯ ಪ್ರಸ್ತಾವನೆಯೊಂದನ್ನು ತಯಾರಿಸಲಾಗಿದ್ದು, ಸದರಿ ಪರ್ಯಾಯ ಪ್ರಸ್ತಾವನೆಯನ್ನು ಒಳಗೊಂಡ ರೂ.23,251.66 ಕೋಟಿ ಮೊತ್ತದ ಪುನರ್ ಪರಿಷ್ಕೃತ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆಯನ್ನು ನೀಡಲು ಕ್ರಮ ಕೈಗೊಳ್ಳಲಾಗಿದೆ.

ಮುಂದುವರೆದು ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯ ಎರಡನೇ ಹಂತದ ಕಾಮಗಾರಿಗಳಲ್ಲಿ, ತುಮಕೂರು ಜಿಲ್ಲೆ ಕೊರಟಗೆರೆ ತಾಲ್ಲೂಕಿನ ಕೋಳಾಲ ಹೋಬಳಿಯ ಭೈರಗೊಂಡ್ಲು ಹತ್ತಿರ 5.78 ಟಿ.ಎಂ.ಸಿ ನೀರನ್ನು ಶೇಖರಿಸುವ ಜಲಾಶಯ ನಿರ್ಮಾಣವನ್ನು ಯೋಜಿಸಲಾಗಿದ್ದು, ಈ ಜಲಾಶಯದ ನಿರ್ಮಾಣದಿಂದ ಕೊರಟಗೆರೆ ತಾಲ್ಲೂಕಿನ ಕೋಳಾಲ ಹೋಬಳಿಯ 17 ಗ್ರಾಮಗಳ 2681 ಎಕರೆ 24 ಗುಂಟೆ ಮತ್ತು ದೊಡ್ಡಬಳ್ಳಾಪುರ ತಾಲ್ಲೂಕಿನ ಸಾಸಲು ಹೋಬಳಿಯ 11 ಗ್ರಾಮಗಳ 2797 ಎಕರೆ 9 ಗುಂಟೆ ಸೇರಿ ಒಟ್ಟು 5478 ಎಕರೆ 33 ಗುಂಟೆ ಭೂಮಿಯು ಮುಳುಗಡೆಯಾಗುವುದು. ಗುತ್ತಿಗೆದಾರರು ಕಾಮಗಾರಿಯನ್ನು ಪ್ರಾರಂಭಿಸಲು ಪೂರ್ವಸಿದ್ಧತಾ ಕೆಲಸ-ಕಾರ್ಯಗಳನ್ನು ಕೈಗೊಂಡಾಗ ಕೊರಟಗೆರೆ ತಾಲ್ಲೂಕಿನ ರೈತರು ದೊಡ್ಡಬಳ್ಳಾಪುರ ತಾಲ್ಲೂಕಿನ ರೈತರಿಗೆ ನೀಡುವ ಪರಿಹಾರ

ದರದಂತೆ ಅವರಿಗೂ ಸಹಾ ಏಕರೂಪದರ ನೀಡಲು ಒತ್ತಾಯಿಸಿದ್ದರಿಂದ ಭೈರಗೊಂಡ್ಲು ಜಲಾಶಯ ನಿರ್ಮಾಣದ ಕಾಮಗಾರಿ ಪ್ರಾರಂಭಿಸುವಲ್ಲಿ ಅಡತಡೆ ಉಂಟಾಗಿರುತ್ತದೆ.

ಭೈರಗೊಂಡ್ಲು ಜಲಾಶಯದ ನಂತರದ ಕಾಮಗಾರಿಗಳಿಗೆ ಭಾಗಶಃ ಟೆಂಡರ್ ಆಹ್ವಾನಿಸಲಾಗಿದ್ದು, ಟೆಂಡರ್ ಪ್ರಕ್ರಿಯೆಯು ಜಾರಿಯಲ್ಲಿರುತ್ತದೆ. ಉಳಿಕೆ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಅಂದಾಜು ಪಟ್ಟಿಗಳನ್ನು ಸಿದ್ಧಪಡಿಸಲಾಗುತ್ತಿದ್ದು, ಶೀಘ್ರವಾಗಿ ಟೆಂಡರ್ ಪ್ರಕ್ರಿಯೆಯನ್ನು ಕೈಗೊಳ್ಳಲು ಕ್ರಮ ವಹಿಸಲಾಗುತ್ತಿದೆ.

ಮೇಲೆ ವಿವರಿಸಿದಂತೆ ಎತ್ತಿನಹೊಳೆ ಯೋಜನೆಯಡಿ ಕಾಮಗಾರಿಗಳು ಅನುಷ್ಠಾನಗೊಂಡಿದ್ದು, ವಿವಿಧ ಹಂತಗಳಲ್ಲಿ ಪ್ರಗತಿಯಲ್ಲಿರುತ್ತವೆ. ಆದರೆ, ಅರಣ್ಯ ತೀರುವಳಿ, ಇತರ ಇಲಾಖೆಗಳಿಂದ ತೀರುವಳಿ, ಭೂಸ್ವಾಧೀನ ಪ್ರಕ್ರಿಯ ಕಾರಣಗಳಿಂದಾಗಿ ಕಾಮಗಾರಿಗಳ ಪ್ರಗತಿಯಲ್ಲಿ ವಿಳಂಬವಾಗಿರುತ್ತದೆ.

**ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯ ಪುನರ್ ಪರಿಷ್ಕೃತ ವಿವರವಾದ ಯೋಜನಾ ಅಂದಾಜು ಮೊತ್ತವು ರೂ.23,251.66 ಕೋಟಿಗಳಾಗಿದ್ದು, ನವೆಂಬರ್ 2022 ರ ಅಂತ್ಯದವರೆಗೆ ಒಟ್ಟಾರೆಯಾಗಿ ಸಂಚಿತ ರೂ.11927.83 ಕೋಟಿ ಆರ್ಥಿಕ ಪ್ರಗತಿ ಮಾಡಲಾಗಿರುತ್ತದೆ. ಪ್ರಸಕ್ತ ಸಾಲಿನಲ್ಲಿ ಸದರಿ ಯೋಜನೆಗೆ ರೂ.1044.00 ಕೋಟಿ ಅನುದಾನ ಒದಗಿಸಲಾಗಿದೆ. ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯ ಕಾಮಗಾರಿಗಳನ್ನು ಅನುದಾನದ ಲಭ್ಯತೆಯನುಸಾರ 2023-24 ನೇ ಸಾಲಿನಲ್ಲಿ ಪೂರ್ಣಗೊಳಿಲು ಯೋಜಿಸಲಾಗಿದೆ.**

**ಸಂಖ್ಯೆ: ಜಸಂಇ 116 ಡಬ್ಲ್ಯೂಎಲ್‌ಎ 2022**

**(ಗೋವಿಂದ ಎಂ. ಕಾರಜೋಳ)**
**ಜಲಸಂಪನ್ಮೂಲ ಸಚಿವರು**